ಎಂಟನೇ ಪಂಚವಾರ್ಷಿಕ ಯೋಜನೆಯಲ್ಲಿ ಅರಣ್ಯ ಸಂಪತ್ತಿನ ಕಳ್ಳ ಸಾಗಾಣಿಕೆಯನ್ನು ತಡೆಯಲು ಇದನ್ನು ಹೆಚ್ಚಿನ ಕಾರ್ಯಕ್ರಮಗಳನ್ನು ಹಾಕಿಕೊಂಡಿದ್ದು ಈಗಾಗಲೇ ಭಾರತ ಸರ್ಕಾರಕ್ಕೆ ಸುಮಾರು 500 ಲಕ್ಷ ರೂಪಾಯಿಗಳ ಯೋಜನೆಯನ್ನು ಕಳುಹಿಸಿಕೊಡಲಾಗಿದೆ. ಅರಣ್ಯ ನೀತಿಯಲ್ಲಿ ಸಹ ಅರಣ್ಯನಾಶ ತಡೆಯಲು ಮುಖ್ಯವಾದ ರೂಪು ರೇಷೆಗಳನ್ನು ಅಳವಡಿಸಲಾಗಿದೆ.

ಮುಖ್ಯವಾಗಿ ಕರ್ನಾಟಕ ರಾಜ್ಯದಲ್ಲಿ ಶ್ರೀಗಂಧದ ಕಳ್ಳ ಸಾಗಾಣಿಕೆಯು ಸಂಪೂರ್ಣವಾಗಿ ತಡೆಗಟ್ಟಬೇಕಾದರೆ ಪಕ್ಕದ ರಾಜ್ಯ ಕೇರಳದಲ್ಲಿ ಸಹ ಕರ್ನಾಟಕ ರಾಜ್ಯದಷ್ಟೇ ಬಿಗಿಯಾಗಿರತಕ್ಕ ಕಾಯ್ದೆಯ ವ್ಯವಸ್ಥೆಯಾಗಬೇಕು. ಇದಕ್ಕಾಗಿ ಒಂದು ಸಮಗ್ರ ಕಾಯಿದೆಯನ್ನು ರೂಪಿಸಿ ದಕ್ಷಿಣ ಭಾರತದ ಎಲ್ಲಾ ರಾಜ್ಯಗಳಿಗೂ ಅನ್ವಯಿಸುವಂತೆ ಭಾರತ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಲಾಗಿದೆ.

ವಲಯ ಅರಣ್ಯ ಅಧಿಕಾರಿಗಳ ಸ್ಪರ್ಧಾತ್ಮಕ ಪರೀಕ್ಷೆ

166 - ಶ್ರೀ ಹೆಚ್.ಎಂ. ರೇವಣ್ಣ (ಮಾಗಡಿ) : ಮಾನ್ಯ ಅರಣ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅರಣ್ಯ ಇಲಾಖೆಯಲ್ಲಿರುವ ಖಾಲಿ ಇರುವ ಸೇವಕರು ಸಹಾಯಕರು ಮತ್ತು ವಲಯ ಅರಣ್ಯ ಅಧಿಕಾರಿಗಳ ಹುದ್ದೆಗಳೆಷ್ಟು?

ಆ) ವಲಯ ಅರಣ್ಯ ಅಧಿಕಾರಿಗಳ ಹುದ್ದೆಗಳಿಗಾಗಿ ನಡೆಸುತ್ತಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕಳೆದ ಮೂರು ವರ್ಷಗಳಿಂದ ನಡೆಸಿಲ್ಲದಿರುವುದು ನಿಜವೇ?

ಇ) ಹಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು? ಹಾಗೂ ಈ ಹುದ್ದೆಗಳ ಪರೀಕ್ಷೆಗಳನ್ನು ಯಾವಾಗ ನಡೆಸಲಾಗುವುದು?

ಶ್ರೀ ಇ.ಟಿ. ಶಂಭುನಾಥ್ (ರಾಜ್ಯ ಅರಣ್ಯ ಸಚಿವರು) :

ಅ) ಈ ಇಲಾಖೆಯಲ್ಲಿ ಸದ್ಯಕ್ಕೆ ಖಾಲಿ ಇರುವ ಹುದ್ದೆಗಳು ಈ ಕೆಳಗಿನಂತಿವೆ.

1. ವಲಯ ಅರಣ್ಯಾಧಿಕಾರಿಗಳು 7
2. ವನಪಾಲಕರು 8
3. ಅರಣ್ಯ ರಕ್ಷಕರು 240
4. ಅರಣ್ಯ ವೀಕ್ಷಕರು 182
5. ಪ್ರಥಮ ದರ್ಜೆ ಸಹಾಯಕರು -
6. ದ್ವಿತೀಯ ದರ್ಜೆ ಸಹಾಯಕರು -

ಆ) ವಲಯ ಅಧಿಕಾರಿಗಳ ಹುದ್ದೆಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು 1988,89 ಮತ್ತು 90 ರ ಸಾಲಿನಲ್ಲಿ ನಡೆಸಲಾಗಿದೆ.

ಇ) ಉದ್ಭವಿಸುವುದಿಲ್ಲ

ಬೀದರ್ ಜಿಲ್ಲೆಯಾದ್ಯಂತ ಅರಣ್ಯ ಇಲಾಖೆಯಲ್ಲಿ ದಿನಗೂಲಿ ಆಧಾರದ ಮೇಲೆ ಕೆಲಸ ಮಾಡುತ್ತಿರುವವರನ್ನು ತೆಗೆದುಹಾಕಿರುವ ಬಗ್ಗೆ

638 - ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಅರಣ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಬೀದರ್ ಜಿಲ್ಲೆಯಾದ್ಯಂತ ಅರಣ್ಯ ಇಲಾಖೆಯಲ್ಲಿ ದಿನಗೂಲಿ ಆಧಾರದ ಮೇಲೆ ತಾತ್ಕಾಲಿಕವಾಗಿ ಕೆಲಸ ಮಾಡುತ್ತಿದ್ದ ನೌಕರರ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರಗಳನ್ನು ನೀಡುವುದು)